**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆಯ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ : ಜಂ.ನಿ(ಆ) ಖಾಯಂ.ಪೂ.ಸೇ.ಘೋ01/2021-22. ದಿನಾಂಕ : 07-01-2023..

**ಜ್ಞಾಪನಾ**

ವಿಷಯ : ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಕಾರ್ಯಕ್ಷಮತೆ ಮತ್ತು ವಿಷಯ ಪರಿಣಿತಿಯನ್ನು ಹೊಂದಿರುವ ಬಗ್ಗೆ ಸಾಮಾನ್ಯ ಪರೀಕ್ಷೆಯನ್ನು ಹಮ್ಮಿಕೊಳ್ಳುವ ಕುರಿತು

ಉಲ್ಲೇಖ : ಈ ಕಛೇರಿಯ ಸಮಸಂಖ್ಯಾ ಪತ್ರ ದಿನಾಂಕ : 08-11-2022. ಮತ್ತು 29-12-2022.

-*-*-*-*-*-

ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ವಿವಿಧ ಹಂತದ ಕಛೇರಿಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾರ್ಯಕ್ಷಮತೆ ಮತ್ತು ವಿಷಯ ಪರಿಣಿತಿ ಕುರಿತು ಏಕರೂಪದ ಸಾಮಾನ್ಯ ಪ್ರಶ್ನೆ ಪತ್ರಿಕೆ ನೀಡಿ Zoom ಮುಖಾಂತರ ದಿನಾಂಕ 28-01-2023 ರಂದು ಪರೀಕ್ಷೆ ನಡೆಸಲು ತೀರ್ಮಾನಿಸಿದ್ದು, ಜಿಲ್ಲಾ ಡಯಟ್‌ಗಳಲ್ಲಿ ಎಲ್ಲಾ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲು ಸೂಚಿಸಲಾಗಿದೆ. ಉಲ್ಲೇಖಿತ ಪ್ರತಿಯನ್ನು ವೆಬ್‌ಸೈಟ್ ನಲ್ಲಿ ಪ್ರಚುರಪಡಿಸಲಾಗಿದೆ.

ದಿನಾಂಕ : 28-01-2023 ರಂದು ಬೆಳಿಗ್ಗೆ 10.30 ರಿಂದ 01.00 ವರೆಗೆ ರಾಜ್ಯದ ವಿವಿಧ ಡಯಟ್ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, Online Zoom ಮುಖಾಂತರ ಏಕರೂಪದ ಪ್ರಶ್ನೆ ಪತ್ರಿಕೆಯನ್ನು ಏಕ ಕಾಲದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಪ್ರಸ್ತುತಪಡಿಸಬೇಕಾಗಿದೆ. ಈ ಬಗ್ಗೆ ಎಲ್ಲಾ ಅಗತ್ಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳುವ ಜೊತೆಗೆ ಪರೀಕ್ಷಾ ದಿನಾಂಕದಂದು ಸಕಾಲದಲ್ಲಿ Zoom Link ಅನ್ನು ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುವ ಕ್ರಮಗಳನ್ನು ಕೈಗೊಳ್ಳತಕ್ಕದ್ದು. ಸಿದ್ಧತೆಗಳು ಸಮರ್ಪಕವಾಗಿದೆಯೇ ಎಂಬುದರ ಬಗ್ಗೆ ಪ್ರಾತ್ಯಕ್ಷಿಕೆಯನ್ನು ಹಮ್ಮಿಕೊಂಡು ಸಂಬಂಧಪಟ್ಟ ಎಲ್ಲಾ ಡಯಟ್‌ಗಳಿಗೆ ಪೂರ್ವ ತಯಾರಿಯನ್ನು ನೀಡತಕ್ಕದ್ದು. ತಾಂತ್ರಿಕ ಅಡಚಣೆ ಸಂದರ್ಭದಲ್ಲಿ ಪರ್ಯಾಯ ಕ್ರಮಗಳಿಗೆ ಅನುವಾಗುವಂತೆ ಸಂಬಂಧಿಸಿದ ಎಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ ಹಾಗೂ ಉಪನಿರ್ದೇಶಕರುಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸಕಾಲದಲ್ಲಿ ಈ-ಮೇಲ್ ಮುಖಾಂತರ ಲಭ್ಯಪಡಿಸತಕ್ಕದ್ದು. ಈ ಬಗ್ಗೆ ಎಲ್ಲಾ ಕ್ರಮಗಳನ್ನೂ ಕೈಗೊಂಡು ವರದಿಯನ್ನು ಸಲ್ಲಿಸತಕ್ಕದ್ದು.

ಪರೀಕ್ಷಾ ದಿನಾಂಕವು ಸಾರ್ವಜನಿಕ ರಜಾ ದಿನದಂದು ನಡೆಯಲಿದ್ದು, ಸದರಿ ದಿನದಂದು ತಾಂತ್ರಿಕತೆ ಮತ್ತು ಪರಿಣತ ಸಿಬ್ಬಂದಿಯೊಂದಿಗೆ ಹಾಜರಿದ್ದು, ಪರೀಕ್ಷಾ ಕಾರ್ಯವು ಯಶಸ್ವಿಯಾಗಿ ನಿರ್ವಹಣೆಯಾಗಬೇಕು. ಪರೀಕ್ಷಾ ಸಮಯದಲ್ಲಿ ವಿಭಾಗೀಯ ಸಹನಿರ್ದೇಶಕರೊಂದಿಗೆ ಹಾಗೂ ಜಿಲ್ಲಾ ಉಪನಿರ್ದೇಶಕರುಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಪರೀಕ್ಷೆಗಳು ಯಾವುದೇ ತಾಂತ್ರಿಕ ಅಡಚಣೆರಹಿತವಾಗಿ ಯಶಸ್ವಿಯಾಗಿ ಪೂರ್ಣಗೊಳ್ಳುವಂತೆ ಕ್ರಮವಹಿಸತಕ್ಕದ್ದು.

**ಡಾ.ವಿಶಾಲ್.ಆರ್. ಭಾ.ಆ.ಸೇ**
**ಆಯುಕ್ತರು**

ಗೆ

1. ಹಿರಿಯ ಸಹಾಯಕ ನಿರ್ದೇಶಕರು ("ಇ" ಆಡಳಿತ)

**ಪ್ರತಿಯನ್ನು ಮಾಹಿತಿಗಾಗಿ:**

1. ಅಪರ ಆಯುಕ್ತರು, ಸಾ.ಶಿ.ಇಲಾಖೆ, ಕಲ್ಬುರ್ಗಿ ಮತ್ತು ಧಾರವಾಡ
2. ನಿರ್ದೇಶಕರು ಪ್ರಾಥಮಿಕ /ಪ್ರೌಢಶಿಕ್ಷಣ/
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು

4. ರಾಜ್ಯದ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ
5. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) / ಅಭಿವೃದ್ಧಿ
6. ಮಾನ್ಯ ಆಯುಕ್ತರ ಆಪ್ತ ಶಾಖೆಗೆ.
7. ಜಂಟಿನಿರ್ದೇಶಕರು (ಆಡಳಿತ) ರವರ ಆಪ್ತ ಶಾಖೆಗೆ
8. ಕಛೇರಿ ಪ್ರತಿ.